ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ರಾಜ್ಯದ ಖಾಸಗಿ ಆಸ್ಪತ್ರೆಗಳಲ್ಲಿ ಆಯುಷ್ಮಾನ್ ಭಾರತ್ ಯೋಜನೆಯಡಿಯಲ್ಲಿ ಚಿಕಿತ್ಸೆ ನೀಡುತ್ತಿರುವ ಬಗ್ಗೆ

ಶ್ರೀ ಆರ್. ಪ್ರಸನ್ನಕುಮಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

82 (50) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದ ಖಾಸಗಿ ಆಸ್ಪತ್ರೆಗಳಲ್ಲಿ ಆಯುಷ್ಮಾನ್ ಭಾರತ್ ಯೋಜನೆಯಡಿಯಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಯೋಜನೆಯಡಿಯಲ್ಲಿ ನೋಂದಾವಣಿಯಾಗಿರುವ ಆಸ್ಪತ್ರೆಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಯಡಿ ವಿಳಂಬವಾಗಿರುವುದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ;

(ಉ) ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೆ ಏರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?